2. ಸಭೆಯ ಮುಂದಿಡಲಾದ ಕಾಗದ ಪತ್ರಗಳು

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು) :— ಮಾನ್ಯ ಅಧ್ಯಕ್ಷರೆ, ಭಾರತ ಸಂವಿಧಾನದ 15(2)ನೇ ಅನುಚ್ಛೇದದ ಮೇರೆಗೆ 31ನೇ ಮಾರ್ಚ್ 2000ದಂದು ಕೊನೆಗೊಂಡ ವರ್ಷಕ್ಕೆ ಭಾರತದ ನಿಯಂತ್ರಕರು ಮತ್ತು ಮಹಾಲೆಕ್ಕ ಪರಿಶೋಧಕರ ವರದಿಯನ್ನು ಸಿವಿಲ್ ಸಂಖ್ಯೆ (3)ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು :— ಮಂಡಿಸಲಾಯಿತು.

ಶ್ರೀ ಡಿ.ವಿ. ಸದಾನಂದಗೌಡ :— ಕೆಳ ಮನೆಯಲ್ಲಿರುವ ಶಾಸಕರು ಯಾವ ವಿಚಾರಗಳನ್ನೂ ಪ್ರಸ್ತಾಪ ಮಾಡುವುದಿಲ್ಲ, ಎಲ್ಲಾ ವಿಚಾರಗಳೂ ಮೇಲ್ಮನೆಯಲ್ಲಿ ಪ್ರಸ್ತಾಪವಾಗುತ್ತವೆ ಎಂಬ ಆರೋಪ ಇದೆ.

MR SPEAKER. :— I have no comments about the proceedings of the other House. It is not fair also.

3. ಅಧ್ಯಕ್ಷರ ಅಪ್ಪಣೆ ಮೇರೆಗೆ

(ಅ) ಕುದುರೆಮುಖ ಕಂಪನಿಗೆ ನೀಡಿರುವ ಗಣಿಗಾರಿಕೆ ಗುತ್ತಿಗೆ ಅವಧಿಯನ್ನು ಇನ್ನೂ ಮೂರು ತಿಂಗಳು ಮುಂದುವರಿಸಲು ಸರ್ಕಾರ ನಿರ್ಧರಿಸಿರುವುದರ ಬಗ್ಗೆ

+ಶ್ರೀ ಆರಗ ಜ್ಞಾನೇಂದ್ರ (ತೀರ್ಥಹಳ್ಳಿ) :— ಮಾನ್ಯ ಅಧ್ಯಕ್ಷರೆ, ಕುದುರೆಮುಖದಲ್ಲಿ ಗಣಿಗಾರಿಕೆ ನಿಲ್ಲಿಸಬೇಕೆಂದು ಡಾ: ಯು.ಆರ್. ಅನಂತಮೂರ್ತಿಯವರ ನೇತೃತ್ವದಲ್ಲಿ ಮಾನ್ಯ ಮುಖ್ಯಮಂತ್ರಿಗಳಿಗೆ ಒಂದು ಮನವಿಯನ್ನು ಕೊಟ್ಟು ಪ್ರಪಂಚದ ಅತ್ಯಂತ ಸೂಕ್ಷ್ಮವಾದ ಪರಿಸರ ಪ್ರದೇಶಗಳಲ್ಲಿ ಒಂದಾದ ಪಶ್ಚಿಮ ಘಟ್ಟದಲ್ಲಿ ಗಣಿಗಾರಿಕೆ ಮಾಡಬಾರದು ಅದರಿಂದ ಏನು ತೊಂದರೆ ಇದೆ ಎಂದು ಮನವರಿಕೆ ಮಾಡಿ ಕೊಟ್ಟಿದ್ದು, ಮಾನ್ಯ ಮುಖ್ಯಮಂತ್ರಿಗಳು ಅತ್ಯಂತ ಸಹಾನುಭೂತಿಯಿಂದ ಪರಿಶೀಲನೆ ಮಾಡಿ ಅದರ ಬಗ್ಗೆ ಯೋಗ್ಯವಾದ ನಿರ್ಧಾರ ತೆಗೆದುಕೊಳ್ಳುತ್ತೇವೆಂದು ನಮಗೆ ಬಹಳ ಪಾಸಿಟೀವ್ ಆಗಿ ಹೇಳಿದರು. ಅದೇ ರೀತಿ ಮೊನ್ನೆ ದಿನ ಸದನದಲ್ಲಿ ಸ್ಟೇಟ್‌ಮೆಂಟ್ ಕೂಡ ಮಾಡಿದರು. ಮಾರನೆ ದಿನ ಕ್ಯಾಬಿನೆಟ್ ಎದುರಿಗೆ ಚರ್ಚೆಗೆ ತರುತ್ತೇವೆ, ಇದರ ಬಗ್ಗೆ ಸಹಾನುಭೂತಿ ಇದೆ, ಕುದುರೆಮುಖದಲ್ಲಿ ಗಣಿಗಾರಿಕೆ ಮಾಡುವುದರಿಂದ ಏನೆಲ್ಲಾ ಅನಾಹುತ ಆಗುತ್ತದೆ ಎಂದು ನಮ್ಮ ಗಮನಕ್ಕೆ ಬಂದಿದೆ ಎಂದು ಮಾನ್ಯ ಮುಖ್ಯಮಂತ್ರಿಗಳು ಹೇಳಿದ್ದರು. ಇದುವರೆಗೆ ಏನು ನಿರ್ಧಾರವಾಗಿದೆ ಎಂದು ಮಾನ್ಯ ಮುಖ್ಯಮಂತ್ರಿಗಳು ಪ್ರಕಟ ಮಾಡಲಿಲ್ಲ. 24ನೇ ತಾರೀಖಿಗೆ ಕುದುರೆ ಮುಖ ಅದಿರು ಕಂಪನಿಗೆ